ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಅಲ್ಪಸಂಖ್ಯಾತರ ಸಮುದಾಯಗಳು ಮತ್ತು ಅಭಿವೃದ್ಧಿ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

477 (555) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ವಿವಿಧ ಅಲ್ಪಸಂಖ್ಯಾತ ಸಮುದಾಯಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಅಲ್ಪಸಂಖ್ಯಾತರ ಅಭಿವೃದ್ಧಿಗೆ ರೂಪಿಸಿರುವ ಯೋಜನೆಗಳು ಯಾವುವು;

(ಇ) ಕಳೆದ 3 ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಅಡಿ ಅಲ್ಪಸಂಖ್ಯಾತರ ಅಭಿವೃದ್ಧಿಗೆ ನಿಗದಿಪಡಿಸಿದ ಅನುದಾನವೆಷ್ಟು ಮತ್ತು ಖರ್ಚು ಮಾಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ 3 ವರ್ಷಗಳಲ್ಲಿ ಕೇಂದ್ರ ಸರ್ಕಾರದ Pre-Metric Meritcum-Scholarshipsಯೋಜನೆ ಅಡಿ ರಾಜ್ಯ ಸರ್ಕಾರ ಪಡೆದಿರುವ ಅನುದಾನವೆಷ್ಟು;

(ಉ) ಉನ್ನತ ಶಿಕ್ಷಣ ಅಭ್ಯಸಿಸುವ ವಿದ್ಯಾರ್ಥಿಗಳಿಗೆ Post-Metric Schorship ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?